**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: ರಾಜ್ಯದ 21 ಗ್ರಾಮ ಪಂಚಾಯತಿಗಳ ಗ್ರಂಥಾಲಯಗಳ ಮೇಲ್ವಿಚಾರಕರುಗಳ 2020-21ನೇ ಸಾಲಿನ ಜೂನ್ 2020 ರಿಂದ ಫೆಬ್ರುವರಿ 2021 ರವರೆಗಿನ ಮಾಹೆಯ ಗೌರವ ಸಂಭಾವನೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್‌ಬಿಬಿ 2015, ದಿನಾಂಕ:26-02-2019.
2. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್‌ಬಿಬಿ 2015, ದಿನಾಂಕ:24-07-2019.
3. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ2 ಟಿಎಫ್‌ಪಿ 2020, ದಿನಾಂಕ:01-04-2020.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 25 ಎಎಫ್‌ಎನ್ 2020, ದಿ:08-04-2020.
5. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಾಗ್ರಂಇ/ನಿಕ/ಬಿ3/07/ಗ್ರಾ.ಪಂ.ಗ್ರಂ/2020-21(ಭಾಗ-4)/7781, ದಿ:10-02-2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ಮತ್ತು (2)ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿನ 5633 ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿರುತ್ತದೆ.

ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಡಿಯಲ್ಲಿನ ಗ್ರಾಮ ಪಂಚಾಯಿತಿಗಳ ಅಧೀನಕ್ಕೆ ವರ್ಗಾವಣೆಗೊಂಡ ಗ್ರಂಥಾಲಯಗಳ ಮೇಲ್ವಿಚಾರಕರ ವೇತನಕ್ಕಾಗಿ ಬಿಡುಗಡೆ ಮಾಡುವ ಸರ್ಕಾರದ ಅನುದಾನವನ್ನು ರಾಜ್ಯ ಹುಜೂರು ಖಜಾನೆಯಿಂದ ಪೇಯೀಸ್ ರಸೀದಿ ಮೇಲೆ ಪಡೆದು ರಾಷ್ಟ್ರೀಯ ಬ್ಯಾಂಕುಗಳ ಮುಖಾಂತರ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲು ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರಿಗೆ ಪ್ರತ್ಯಾಯೋಜಿಸಿದೆ.

2020-21ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2205-00-198-1-02-300ರಡಿಯಲ್ಲಿ "ಗ್ರಾಮ ಪಂಚಾಯಿತಿಗಳ ಗ್ರಂಥಾಲಯಗಳಿಗೆ ಅನುದಾನ" ಎಂಬ ಹೆಸರಿನಲ್ಲಿ ಒಟ್ಟು ರೂ.48,43,44,000/- ನಿಗಧಿಪಡಿಸಲಾಗಿದೆ (ನಲವತ್ತೆಂಟು ಕೋಟಿ ನಲವತ್ತಮೂರು ಲಕ್ಷದ ನಲವತ್ತನಾಲ್ಕು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಒದಗಿಸಲಾಗಿದೆ. ಈ ಪೈಕಿ ಮೇಲೆ ಓದಲಾದ ಕ್ರಮ ಸಂಖ್ಯೆ(3) ಮತ್ತು (4)ರ ಸರ್ಕಾರದ ಆದೇಶದಲ್ಲಿ ಸರ್ಕಾರದ ಆರ್ಥಿಕ ಪ್ರತ್ಯಾಯೋಜನ ಆದೇಶದಂತೆ ಆಯವ್ಯಯ ಅವಕಾಶದ 1/12ರಷ್ಟು ಮಾತ್ರ ವೆಚ್ಚ ಭರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

2020-21ನೇ ಸಾಲಿನ ಮಧ್ಯದಲ್ಲಿ 21 ಗ್ರಾಮ ಪಂಚಾಯತಿ ಗ್ರಂಥಾಲಯಗಳು ಪಟ್ಟಣ ಪಂಚಾಯತಿ/ ಪುರಸಭೆ / ನಗರ ಸಭೆಗಳಾಗಿ ಪರಿವರ್ತನೆಯಾಗಿದ್ದು, ಒಟ್ಟು 21 ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಾಸಿಕ ಗೌರವ ಸಂಭಾವನೆ ತಲಾ ರೂ.7,000/-ಗಳಂತೆ ಪಾವತಿಸುವ ಸಲುವಾಗಿ ಜೂನ್ 2020 ರಿಂದ ಫೆಬ್ರುವರಿ 2021 ರವರೆಗಿನ ಮಾಹೆಯ ಅನುದಾನ ರೂ:13,23,000/-(ರೂಪಾಯಿ ಹದಿಮೂರು ಲಕ್ಷದ ಇಪ್ಪತ್ತ ಮೂರು ಸಾವಿರಗಳು ಮಾತ್ರ)ಗಳನ್ನು ಪ್ರಸ್ತುತ ಗ್ರಾಮ ಪಂಚಾಯತಿಗಳಲ್ಲಿ ನಿರ್ವಹಿಸಲ್ಪಡುತ್ತಿರುವ "ಗ್ರಾಮ ಪಂಚಾಯತಿ ಶಾಸನಬದ್ಧ ಅನುದಾನ" ಬ್ಯಾಂಕ್ ಖಾತೆಗಳಿಗೆ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಕಪಂರಾಅ / ಅಭಿವೃದ್ಧಿ / 79 /2021,</u>**
**<u>ಬೆಂಗಳೂರು. ದಿನಾಂಕ: 24-03-2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2020-21ನೇ ಸಾಲಿನ ಮಧ್ಯದಲ್ಲಿ 21 ಗ್ರಾಮ ಪಂಚಾಯತಿ ಗ್ರಂಥಾಲಯಗಳು ಪಟ್ಟಣ ಪಂಚಾಯತಿ/ ಪುರಸಭೆ / ನಗರ ಸಭೆಗಳಾಗಿ ಪರಿವರ್ತನೆಯಾಗಿದ್ದು, ಒಟ್ಟು 21 ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಾಸಿಕ ಗೌರವ ಸಂಭಾವನೆ ತಲಾ ರೂ.7,000/-ಗಳಂತೆ ಪಾವತಿಸುವ ಸಲುವಾಗಿ ಜೂನ್ 2020 ರಿಂದ ಫೆಬ್ರುವರಿ 2021 ರವರೆಗಿನ ಮಾಹೆಯ ಅನುದಾನ ರೂ.13,23,000/-(ರೂಪಾಯಿ ಹದಿಮೂರು ಲಕ್ಷದ ಇಪ್ಪತ್ತ ಮೂರು ಸಾವಿರಗಳು ಮಾತ್ರ)ಗಳನ್ನು ಲೆಕ್ಕ ಶೀರ್ಷಿಕೆ 2205-00-198-1-02-300 ರಡಿಯಲ್ಲಿ ಭರಿಸಿ, ಅನುಬಂಧ-1ರಲ್ಲಿರುವಂತೆ 21 ಗ್ರಾಮ ಪಂಚಾಯತ್‌ಗಳಿಗೆ ಬಿಡುಗಡೆಗೊಳಿಸುವಂತೆ ಹಾಗೂ ಬಿಡುಗಡೆ ಮಾಡಿರುವ ಅನುದಾನದ ವಿವರವನ್ನು ಖಾತೆ ಸಂಖ್ಯೆ:64062923099ರ ಮೂಲಕ ಆಯಾ ಗ್ರಾಮ ಪಂಚಾಯತಿಯ ಶಾಸನಬದ್ಧ ಅನುದಾನ ಬ್ಯಾಂಕ್ ಖಾತೆಗಳಿಗೆ ಬಿಡುಗಡೆಗೊಳಿಸುವಂತೆ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಧಾನಸೌಧ ಶಾಖೆ, ಬೆಂಗಳೂರು-560001 ಇವರಿಗೆ ಆದೇಶಿಸಿದೆ.

Scanned By Scanner Go

Scanned with CamScanner

ಮೇಲ್ಕಂಡ ಉದ್ದೇಶಗಳಿಗಲ್ಲದೇ ಈ ಅನುದಾನವನ್ನು ಗ್ರಾಮ ಪಂಚಾಯಿತಿಗಳು ಬೇರೆ ಯಾವುದೇ ಉದ್ದೇಶಕ್ಕೂ ವಿನಿಯೋಗಿಸತಕ್ಕದ್ದಲ್ಲ. ಈಗಾಗಲೇ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಗೌರವ ಸಂಭಾವನೆ ಪಾವತಿಸಿದ್ದಲ್ಲಿ, ಮತ್ತೊಮ್ಮೆ ಪಾವತಿಸತಕ್ಕದ್ದಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 146 ವೆಚ್ಚ-6/2021(ಇ), ದಿನಾಂಕ 22-03-2021ರನ್ವಯ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/03/21
(ನವೀನ್ ಕುಮಾರ್. ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ)(ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
24/3/21

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಹಳೆ ಕಟ್ಟಡ ಕಛೇರಿ, ಕೆ.ಜಿ.ರಸ್ತೆ, ಬೆಂಗಳೂರು.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
5. ನಿರ್ದೇಶಕರು, ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
6. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
7. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳು (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ
8. ವ್ಯವಸ್ಥಾಪಕರು, ಭಾರತೀಯ ಸ್ಟೇಟ್‌ಬ್ಯಾಂಕ್, ವಿಧಾನಸೌಧ ಶಾಖೆ, ಬೆಂಗಳೂರು-01 ಇವರಿಗೆ ಅಗತ್ಯ ಕ್ರಮಕ್ಕಾಗಿ.
9. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
10. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
11. ಮಾಹಿತಿ ಕೇಂದ್ರ/ ವೆಬ್‌ಸೈಟ್, ಗ್ರಾಅಪ ಇಲಾಖೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
4. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ.
7. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತಕ್ಕೆ.

Scanned with CamScanner

ಸರ್ಕಾರದ ಆದೇಶ ಸಂಖ್ಯೆ: ಕಪಂರಾಅ / ಅಭಿವೃದ್ಧಿ / 79 /2021,
ಬೆಂಗಳೂರು. ದಿನಾಂಕ: 24-03-2021 ಕ್ಕೆ ಅನುಬಂಧ-1

(ರೂ.ಗಳಲ್ಲಿ)

| ಕ್ರ.ಸಂ | ಜಿಲ್ಲಾ ಕೇಂದ್ರ ಗ್ರಂಥಾಲಯ ವಿವರ | ಗ್ರಾಮ ಪಂಚಾಯಿತಿ ಗ್ರಂಥಾಲಯದಹೆಸರು | ಜೂನ್ 2020 ರಿಂದ ಫೆಬ್ರುವರಿ 2021 ರವರೆಗೆ ಬಿಡುಗಡೆ ಮಾಡಿರುವ ಗೌರವ ಸಂಭಾವನೆ |
|---|---|---|---|
| 1 | ಕೊಪ್ಪಳ | 1. ಯಲಬುರ್ಗಾ | 63000 |
| | | 2. ಕುಷ್ಠಗಿ | 63000 |
| 2 | ಮಂಗಳೂರು | 3. ವಿಟ್ಲ | 63000 |
| | | 4. ಸೋಮೇಶ್ವರ | 63000 |
| | | 5. ಕಣ್ಣೂರು | 63000 |
| 3 | ಯಾದಗಿರಿ | 6. ಪರಸನಹಳ್ಳಿ | 63000 |
| 4 | ಕಲಬುರಗಿ | 7. ಕಮಲಾಪುರ | 63000 |
| | | 8. ಕಾಳಗಿ | 63000 |
| | | 9. ಚಿಂಚೋಳಿ | 63000 |
| | | 10. ಅಫಜಲಪುರ | 63000 |
| | | 11. ಶಹಬಾದ್ | 63000 |
| 5 | ಉಡುಪಿ | 12. ಯಡ್ತರೆ | 63000 |
| | | 13. ಪಡುವರಿ | 63000 |
| | | 14. ಬೈಂದೂರು(ಮಯ್ಯಾಡಿ) | 63000 |
| 6 | ಮಂಡ್ಯ | 15. ಬೆಳ್ಳೂರು | 63000 |
| | | 16. ಜವರನಹಳ್ಳಿ | 63000 |
| 7 | ಬೆಂಗಳೂರುನಗರ | 17. ಮಾದನಾಯಕನಹಳ್ಳಿ | 63000 |
| | | 18. ಮಾದಾವರ | 63000 |
| 8 | ಬೆಂಗಳೂರು ಗ್ರಾಮಾಂತರ | 19. ಅರಿಶಿನಕುಂಟೆ | 63000 |
| | | 20. ಬಸವನಹಳ್ಳಿ | 63000 |
| | | 21. ವಿಶ್ವೇಶ್ವರಪುರ | 63000 |
| | ಒಟ್ಟು | | **1323000** |

B. Naveenkumar 24/03/21
(ನವೀನ್ ಕುಮಾರ್.ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)(ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

Scanned with CamScanner